# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** M/s Mysore Mercantile Company Limited ಕಂಪನಿಗೆ ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 10 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಸ್ಥಾಪಿಸಲು ಹಂಚಿಕೆ ಆದೇಶ ನೀಡುವ ಬಗ್ಗೆ.

**ಓದಲಾಗಿದೆ:** 1. ಸರ್ಕಾರದ ಆದೇಶ ಸಂಖ್ಯೆ: ಇಎನ್ 301 ಎನ್‌ಸಿಇ 2018 ದಿನಾಂಕ:05.11.2018.

2. M/s Shree Krishna Minerals ಇವರ ಪತ್ರ ದಿನಾಂಕ:14.12.2018.

3. M/s Mysore Mercantile Company Limited ಇವರ ಪತ್ರ ದಿನಾಂಕ:17.12.2018.

* * *

**ಪ್ರಸ್ತಾವನೆ :-**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ಸರ್ಕಾರದ ಆದೇಶದಲ್ಲಿ M/s Mysore Mercantile Company Limited ಕಂಪನಿಗೆ ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಉಗರಗೋಲ, ಬೆಟ್ಸೂರು, ಯಡ್ರಾವಿ, ಸವದತ್ತಿ, ಹರ್ಲಾಪುರ, ಸವದತ್ತಿ ತಾಂಡ ಮತ್ತು ಕುರುವನಕೊಪ್ ಗ್ರಾಮಗಳಲ್ಲಿ 10 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಸ್ವಂತ ಉಪಯೋಗಕ್ಕಾಗಿ / ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ಉದ್ದೇಶಕ್ಕಾಗಿ ಷರತ್ತುಗಳಗೊಳಪಟ್ಟು ಹಂಚಿಕೆ ಮಾಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2)ರ M/s Shree Krishna Minerals ಇವರ ಪತ್ರದಲ್ಲಿ ಸದರಿ ಕಂಪನಿಗೆ ಹಂಚಿಕೆ ಮಾಡಲಾದ 10 ಮೆ.ವ್ಯಾ ಸಾಮರ್ಥ್ಯ ಮತ್ತು M/s Mysore Mercantile Company Limited ರವರ 10 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆ ಒಂದೇ ಸ್ಥಳದಲ್ಲಿ ಬರುವುದಾಗಿ ತಿಳಿದು ಬಂದಿರುವುದಾಗಿ ತಿಳಿಸಿರುತ್ತಾರೆ ಮತ್ತು ಈ ಸ್ಥಿತಿಯಲ್ಲಿ 02 ಕಂಪನಿಗಳಿಗೆ ಯೋಜನೆಯನ್ನು ಅಭಿವೃದ್ಧಿಪಡಿಸುವುದು ಪ್ರಾಯೋಗಿಕವಾಗಿ ಕಷ್ಟ ಸಾಧ್ಯವಾಗಿದ್ದು, ಮುಂದೆ ಉದ್ಭವಿಸಬಹುದಾದ ಕಾನೂನಾತ್ಮಕ ತೊಡಕುಗಳನ್ನು ತಪ್ಪಿಸುವ ಸಲುವಾಗಿ M/s Mysore Mercantile Company Limited ಕಂಪನಿಯೊಂದಿಗೆ ಹೊಂದಾಣಿಕೆ ಮಾಡಿಕೊಳ್ಳಲಾಗಿರುವುದಾಗಿ ತಿಳಿಸುತ್ತಾ, M/s Mysore Mercantile Company Limited ಕಂಪನಿಗೆ ಹಂಚಿಕೆ ಮಾಡಲಾದ ಯೋಜನೆಯನ್ನು ಅನುಷ್ಠಾನಗೊಳಿಸಲು ಯಾವುದೇ ಆಕ್ಷೇಪಣೆ ಇರುವುದಿಲ್ಲವೆಂದು ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3)ರ M/s Mysore Mercantile Company Limited ಇವರ ಪತ್ರದಲ್ಲಿ ಸದರಿ ಕಂಪನಿಗೆ ಹಂಚಿಕೆ ಮಾಡಲಾದ 10 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆ ಹಾಗೂ M/s Shree Krishna Minerals ಇವರಿಗೆ ಹಂಚಿಕೆಯಾದ ಪವನ ವಿದ್ಯುತ್ ಯೋಜನೆಯ ಸ್ಥಳಗಳು Overlap ಆಗುತ್ತಿರುವುದಾಗಿ ತಿಳಿಸುತ್ತಾ, M/s Shree Krishna Minerals ಇವರೊಂದಿಗೆ ಈ ಕುರಿತಂತೆ ಹೊಂದಾಣಿಕೆ ಮಾಡಿಕೊಳ್ಳಲಾಗಿದ್ದು, ಸದರಿ ಕಂಪನಿಯು ಯೋಜನೆಯನ್ನು ಅನುಷ್ಠಾನಗೊಳಿಸಲು ಸಹಮತಿ ಪತ್ರ ನೀಡಿರುವುದಾಗಿ ತಿಳಿಸಿರುತ್ತಾರೆ ಹಾಗೂ M/s Mysore Mercantile Company Limited ಕಂಪನಿಗೆ ಬೆಳಗಾವಿ ಜಿಲ್ಲೆಯ

....2)

ಸವದತ್ತಿ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 10 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾದ ಸರ್ಕಾರದ ಆದೇಶ ಸಂಖ್ಯೆ: ಇಎನ್ 301 ಎನ್‌ಸಿಇ 2018 ದಿನಾಂಕ:05.11.2018 ರ ಆದೇಶದಲ್ಲಿನ ಷರತ್ತು (3)ನ್ನು ಕೈಬಿಡುವಂತೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ : ಇಎನ್ 301 ಎನ್‌ಸಿಇ 2018, ಬೆಂಗಳೂರು, ದಿನಾಂಕ:28.01.2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, M/s Mysore Mercantile Co. Ltd,, ಕಂಪನಿಗೆ ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಉಗರಗೋಲ, ಬೆಟ್ಸೂರು, ಯಡ್ರಾವಿ, ಸವದತ್ತಿ, ಹರ್ಲಾಪುರ, ಸವದತ್ತಿ ತಾಂಡ ಮತ್ತು ಕುರುವನಕೊಪ್ಪ ಗ್ರಾಮಗಳಲ್ಲಿ 10 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾದ ಸರ್ಕಾರದ ಆದೇಶ ಸಂಖ್ಯೆ: ಇಎನ್ 301 ಎನ್‌ಸಿಇ 2018 ದಿನಾಂಕ:05.11.2018 ರ ಆದೇಶ ಭಾಗದ ಷರತ್ತು (3) " M/s Mysore Mercantile Co. Ltd,, ಕಂಪನಿಗೆ ಹಂಚಿಕೆ ಮಾಡಲಾದ ಈ 10 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆ ಹಾಗೂ M/s Shree Krishna Minerals ಕಂಪನಿಗೆ ಹಂಚಿಕೆ ಮಾಡಲಾದ ಪವನ ವಿದ್ಯುತ್ ಯೋಜನೆಯ ಮೇಲೆ Overlap ಆಗುತ್ತಿರುವುದರಿಂದ, M/s Mysore Mercantile Co. Ltd,, ಕಂಪನಿಯು Non-overlap ಪ್ರದೇಶದಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು ಎಂದು ವಿಧಿಸಿರುವ ಷರತ್ತನ್ನು ಕೈಬಿಟ್ಟು ಆದೇಶಿಸಿದೆ.

ಉಳಿದಂತೆ, ಸರ್ಕಾರದ ಆದೇಶ ಸಂಖ್ಯೆ: ಇಎನ್ 301 ಎನ್‌ಸಿಇ 2018 ದಿನಾಂಕ:05.11.2018 ರಲ್ಲಿನ ಷರತ್ತು ಮತ್ತು ನಿಬಂಧನೆಗಳು ಯಥಾವತ್ತಾಗಿ ಮುಂದುವರೆಯುತ್ತವೆ.

ಸದರಿ ಆದೇಶವನ್ನು ರದ್ದುಪಡಿಸುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

ಇವರಿಗೆ: ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

ಪ್ರತಿ:

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
2 ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

...3)

3 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.

4 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ,ಬೆಂಗಳೂರು-9.

5 ವ್ಯವಸ್ಥಾಪಕ ನಿರ್ದೇಶಕರು, ಹೆಸ್ಕಾಂ.

6 ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ.

7 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು-1.

8 ಉಪ ಅರಣ್ಯ ಸಂರಕ್ಷಣಾಧಿಕಾರಿ, ಬೆಳಗಾವಿ ಜಿಲ್ಲೆ.

9 ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

10 M/s Mysore Mercantile Company Limited, #201 & 202, ``Shreshta Bumi'', No.87, K.R.Road, Basavanagudi, Bengaluru – 560 004.

11 M/s Shree Krishna Minerals, #1352, M.P.Prakash Nagar, Hospet – 583 201.

12 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಹಿರಿಯ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.

13 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.

14 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.